# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 647 (710)
ಮಾನ್ಯ ಸದಸ್ಯರ ಹೆಸರು :ಶ್ರೀ ರಾಮೋಜಿ ಗೌಡ
(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ :18-08-2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸೇವಾನಿರತ ಪದವೀಧರ ಶಿಕ್ಷಕರಿಗೆ ಆಗಿರುವ ಅನ್ಯಾಯದ ಕುರಿತು ಪರಿಹಾರ ಒದಗಿಸಲು ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ 04.09.2025ರಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಇದುವರೆವಿಗೂ ಪದವೀಧರ ಶಿಕ್ಷಕರ ಸಮಸ್ಯೆ ಬಗೆಹರಿಸದಿರಲು ಕಾರಣಗಳೇನು. | ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸೇವಾನಿರತ ಪದವೀಧರ ಶಿಕ್ಷಕರ ಬೇಡಿಕೆಗಳನ್ನು ಪರಿಶೀಲಿಸಿ ವರದಿ ನೀಡಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಪಿ 370 ಪಿಬಿಎಸ್ 2024, ದಿನಾಂಕ: 23-09-2024 ರಂದು ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ಈಗಾಗಲೇ ಎರಡು ಬಾರಿ ಸಭೆಯನ್ನು ನಡೆಸಿರುತ್ತದೆ.<br><br>ಮಧ್ಯಂತರ ಅಭಿಪ್ರಾಯವನ್ನು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರು ದಿನಾಂಕ: 16.04.2025ರಲ್ಲಿ ಶಾಲಾ ಶಿಕ್ಷಣ ಸಚಿವಾಲಯಕ್ಕೆ ಸಲ್ಲಿಸಿದ್ದು, ಈ ಸಂಬಂಧ ಅಭಿಪ್ರಾಯವನ್ನು ನೀಡುವಂತೆ ಕೋರಿ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಕಾನೂನು ಇಲಾಖೆಯನ್ನು ಕೋರಲಾಗಿತ್ತು. ಈ ಕುರಿತು ಕಾನೂನು ಇಲಾಖೆಯ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಸ್ವೀಕೃತವಾಗಿದ್ದು, ಆರ್ಥಿಕ ಇಲಾಖೆಯ ಅಭಿಪ್ರಾಯ ಸ್ವೀಕೃತವಾಗಬೇಕಾಗಿರುತ್ತದೆ. ಆರ್ಥಿಕ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತಗೊಂಡ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.<br><br>ಆರ್.ಟಿ.ಇ ಮತ್ತು ಎನ್.ಸಿ.ಟಿ.ಇ ಮಾನದಂಡಗಳನ್ನು ಆಧರಿಸಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ಮಾಡಲಾಗಿರುತ್ತದೆ.<br><br>ದಿನಾಂಕ:19-05-2017ರ ಆದೇಶದ ಅನುಸಾರ ಪ್ರಾಥಮಿಕ ಶಾಲಾ ಶಿಕ್ಷಕರು (01 ರಿಂದ 05 ತರಗತಿ) ಎಂಬುದಾಗಿ ಪುನರ್ ಪದನಾಮೀಕರಿಸಿ ವರ್ಗೀಕರಿಸಲಾಗಿದೆ. ಆದರೆ ಹಿಂಬಡ್ತಿ ನೀಡಿರುವುದಿಲ್ಲ. |
| ಆ) | 1 ರಿಂದ 7ನೇ ತರಗತಿವರೆಗೆ ನೇಮಕಗೊಂಡಿರುವ ಶಿಕ್ಷಕರಿಗೆ 1 ರಿಂದ 5ಕ್ಕೆ ಹಿಂಬಡ್ತಿ ನೀಡಿದ್ದು, ಕಾನೂನು ಇಲಾಖೆ ಯಾವುದೇ ನಿಯಮಗಳನ್ನು ಪೂರ್ವಾನ್ವಯಗೊಳಿಸಬಾರದೆಂಬ ಹಾಗೂ 1 ರಿಂದ 7ಕ್ಕೆ ನೇಮಕಾತಿ ಹೊಂದಿದವರಗೆ 1 ರಿಂದ 5ಕ್ಕೆ ಹಿಂಬಡ್ತಿ ನೀಡಿರುವುದು ಸರಿಯಾದ ಕ್ರಮವಲ್ಲ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಪದವೀಧರ ಶಿಕ್ಷಕರಿಗೆ ಆಗಿರುವ ಅನ್ಯಾಯಗಳನ್ನು ಯಾವಾಗ ಸರಿಪಡಿಸಲಾಗುವುದು? | |

ಇಪಿ 102 ಪಿಎಂಎ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು